ಜಿಲ್ಲಾ ಪಂಚಾಯತ್, ಉಪ ನಿರ್ದೇಶಕರವರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಚಾಮರಾಜನಗರ.

ಸಂಖ್ಯೆ: ಬಿ2/48896/ಖಾ.ಶಾ.ನೋಂದಣಿ/106/2015-16. / 2932 07/04/16    ದಿನಾಂಕ: 24-03-2016.

ನಮೂನೆ-2

(ನಿಯಮ-3, ಉಪನಿಯಮ5(ಬಿ))

ಶಾಲಾ ನೋಂದಣಿ ಪ್ರಮಾಣ ಪತ್ರ ಸಂಖ್ಯೆ. 05/2016-17.

ಸಿ.ಎಂ.ಐ. ಕ್ರೈಸ್ಟ್ ಶೈಕ್ಷಣಿಕ ಮತ್ತು ಚಾರಿಟಬಲ್ ಟ್ರಸ್ಟ್ (ರಿ.) ಇವರ ಆಶ್ರಯದಲ್ಲಿ, ಕ್ರೈಸ್ಟ್ ಸಿ.ಎಂ.ಐ. ಪಬ್ಲಿಕ್ ಆಂಗ್ಲ ಮಾಧ್ಯಮ ಹಿರಿಯ ಪ್ರಾಥಮಿಕ ಶಾಲೆ, ಚಾವರ ಭವನ, ಗುಂಡ್ಲುಪೇಟೆ ಟೌನ್, ಚಾಮರಾಜನಗರ ಜಿಲ್ಲೆ. ಇದರ ಗೌರ್ನಿಂಗ್ ಕೌನ್ಸಿಲ್‌ಗೆ ಕರ್ನಾಟಕ ಶಿಕ್ಷಣ ಕಾಯ್ದೆ 1983(ಕರ್ನಾಟಕ ಆಕ್ಟ್ 1995)ರ ಸೆಕ್ಷನ್ 31ರಂತೆ ಹಾಗೂ ಸರ್ಕಾರದ ಆದೇಶ ಸಂಖ್ಯೆ. ಇಡಿ.44.ಪಿ.ಜಿ.ಸಿ.2002, ದಿನಾಂಕ: 11-06-2002 ಮತ್ತು ಇಡಿ617.ಪಿಜಿಸಿ.2015, ದಿನಾಂಕ: 23-12-2015ರ ಪ್ರಕಾರ ಈ ದಿನಾಂಕ: 24-03-2016 ರಂದು ಈ ಕೆಳಗೆ ನಮೂದಿಸಿರುವ ಶಿಕ್ಷಣ ಸಂಸ್ಥೆಯನ್ನು ಕ್ರಮಸಂಖ್ಯೆ. 05/2016-17, ಪುಟಸಂಖ್ಯೆ (43) ವಾಲ್ಯೂಂ ಸಂಖ್ಯೆ (2)ರಲ್ಲಿ ಈ ಕಛೇರಿಯಲ್ಲಿನ ಶೈಕ್ಷಣಿಕ ಸಂಸ್ಥೆಗಳ ನೋಂದಣಿ ವಹಿಯಲ್ಲಿ ನೋಂದಾಯಿಸಲಾಗಿದೆ ಎಂದು ಪ್ರಮಾಣೀಕರಿಸಲಾಗಿದೆ.

| | | |
|---|---|---|
| 1 | ಕ್ರಮಸಂಖ್ಯೆ | 05/2016-17 |
| 2 | ಶಾಲೆಯ ಹೆಸರು ಮತ್ತು ವಿಳಾಸ | ಕ್ರೈಸ್ಟ್ ಸಿ.ಎಂ.ಐ. ಪಬ್ಲಿಕ್ ಆಂಗ್ಲ ಮಾಧ್ಯಮ ಹಿರಿಯ ಪ್ರಾಥಮಿಕ ಶಾಲೆ, ಚಾವರ ಭವನ, ಗುಂಡ್ಲುಪೇಟೆ ಟೌನ್, ಚಾಮರಾಜನಗರ ಜಿಲ್ಲೆ. |
| 3 | ಅನುಮತಿ ನೀಡಿದ ತರಗತಿ | 1 ರಿಂದ 5ನೇ ತರಗತಿ, (ಶಾಶ್ವತ ಅನುದಾನ ರಹಿತವಾಗಿ) |
| 4 | ಪ್ರಾರಂಭಿಸಬೇಕಾದ ಶೈಕ್ಷಣಿಕ ವರ್ಷ | 2016-17ನೇ ಶೈಕ್ಷಣಿಕ ವರ್ಷ (ಸ್ವಾಭಾವಿಕ ಬೆಳವಣಿಗೆಯಂತೆ) |
| 5 | ಅನುಮತಿ ನೀಡಿದ ಮಾಧ್ಯಮ | ಆಂಗ್ಲ ಮಾಧ್ಯಮ, |
| 6 | ಶುಲ್ಕ ಪಾವತಿ ಮಾಡಿರುವುದು. | ಡಿ.ಡಿ. ಸಂ. 476811, ದಿನಾಂಕ: 18-03-2016, ರೂ. 25000/-<br>ಡಿ.ಡಿ. ಸಂ. 476812, ದಿನಾಂಕ: 18-03-2016, ರೂ. 10000/- |

ಈ ನೋಂದಣಿ ಪ್ರಮಾಣ ಪತ್ರವನ್ನು ಈ ಕೆಳಕಂಡ ಷರತ್ತಿಗೊಳಪಟ್ಟ ನೀಡಲಾಗಿದೆ. ಇದರಲ್ಲಿ ಯಾವುದೇ ಷರತ್ತನ್ನು ಉಲ್ಲಂಘಿಸಿದಲ್ಲಿ ಮೇಲ್ಕಂಡ (ನೋಂದಣಿ) ಅನುಮತಿಯನ್ನು ಗದ್ದುಪಡಿಸುವ ಅಧಿಕಾರವನ್ನು ಇಲಾಖೆಯು ಕಾಯ್ದಿರಿಸಿಕೊಂಡಿದೆ.

1) ಈ ನೋಂದಣಿಯು ಕರ್ನಾಟಕ ಶಿಕ್ಷಣ ಸಂಸ್ಥೆಗಳು (ಖಾಸಗಿ ಶಿಕ್ಷಣ ಸಂಸ್ಥೆಗಳ ನಿಯಂತ್ರಣ, ವರ್ಗೀಕರಣ) ನಿಯಮ 1997, ನಿಯಮ-3(5) (ಡಿ) ನಲ್ಲಿ ಸೂಚಿಸಿರುವ ಅಂಶಗಳಿಗೆ ಒಳಪಟ್ಟಿರುತ್ತದೆ.
2) ಕರ್ನಾಟಕ ಶಿಕ್ಷಣ ಸಂಸ್ಥೆಗಳು (ವರ್ಗೀಕರಣ, ನಿಯಂತ್ರಣ ಮತ್ತು ಪಠ್ಯವಸ್ತು ನಿಗದೀಕರಣ ಇತ್ಯಾದಿ) ನಿಯಮಾವಳಿಗಳು 1995ರ ನಿಯಮ 4, 5, 6 ಮತ್ತು 8ರನ್ವಯ ಸುರಕ್ಷತಾ ಕ್ರಮವಾಗಿ ಶಾಲಾ ಕಟ್ಟಡವು ಕಡ್ಡಾಯವಾಗಿ ಉತ್ತಮ ಗುಣಮಟ್ಟದ ಮೇಲ್ಛಾವಣಿಯನ್ನು ಹೊಂದಿದ್ದು, ಉತ್ತಮ ಗಾಳಿ, ಬೆಳಕಿಗೆ ಅವಕಾಶವಿರಬೇಕು. ಗಂಡು ಮತ್ತು ಹೆಣ್ಣುಮಕ್ಕಳಿಗೆ ಪ್ರತ್ಯೇಕ ಶೌಚಾಲಯಗಳನ್ನು ಒದಗಿಸಬೇಕು. ಶುದ್ಧವಾದ ಕುಡಿಯುವ ನೀರನ್ನು ಒದಗಿಸಬೇಕು. ಶಾಲಾ ಆವರಣದಲ್ಲಿರುವ ಅಪಾಯಕಾರಿ ಸ್ಥಳಗಳಿಗೆ ಬೇಲಿ ಹಾಕಿ ಶಾಲಾ ಆವರಣಕ್ಕೆ ಮಕ್ಕಳ ಸುರಕ್ಷತೆಗಾಗಿ ಕಾಂಪೌಂಡನ್ನು ಕಡ್ಡಾಯವಾಗಿ ನಿರ್ಮಿಸತಕ್ಕದ್ದು ಮತ್ತು ಬೆಂಕಿ ಆಕಸ್ಮಿಕಗಳನ್ನು ತಪ್ಪಿಸಲು ಸುರಕ್ಷತಾ ಕ್ರಮಗಳನ್ನು ತೆಗೆದುಕೊಳ್ಳಬೇಕು ಮತ್ತು ಶಾಲಾ ಮಕ್ಕಳ ಸುರಕ್ಷತೆಯ ಬಗ್ಗೆ ಹೆಚ್ಚಿನ ಆದ್ಯತೆ ನೀಡಬೇಕು.
3) ಶಿಕ್ಷಣ ಸಂಸ್ಥೆಯು ಯಾವುದೇ ಸಂದರ್ಭದಲ್ಲಿಯೂ ಸರ್ಕಾರದ ಪೂರ್ವಾನುಮತಿ ಇಲ್ಲದೆ ಹೆಚ್ಚಿನ ವಿಭಾಗಗಳನ್ನು ತೆರೆಯುವಂತಿಲ್ಲ.
4) ಕರ್ನಾಟಕ ಶಿಕ್ಷಣ ಕಾಯ್ದೆ-41(5)ರಂತೆ ಶಾಲೆಯನ್ನು ಮಂಜೂರು ಮಾಡಿರುವ ಮಾಧ್ಯಮದಲ್ಲಿ ಮತ್ತು ಅದೇ ಸ್ಥಳದಲ್ಲಿ ಮಾತ್ರ ತೆರೆಯತಕ್ಕದ್ದು. ಹಾಗೂ ಯಾವುದೇ ಕಾರಣಕ್ಕೂ ಸ್ಥಳ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.
5) ಯಾವ ಆಡಳಿತ ಮಂಡಳಿಗೆ ಶಾಲೆ ನಡೆಸಲು ಅನುಮತಿ ನೀಡಲಾಗಿದೆಯೋ ಅದೇ ಆಡಳಿತ ಮಂಡಳಿಯು ಅದೇ ಸ್ಥಳದಲ್ಲಿ ಮತ್ತು ಅದೇ ಹೆಸರಿನಲ್ಲಿ ನಡೆಸತಕ್ಕದ್ದು. ಮತ್ತು ಯಾವುದೇ ಕಾರಣಕ್ಕೂ ಸರ್ಕಾರದ ಪೂರ್ವಾನುಮತಿ ಇಲ್ಲದೆ ಹಸ್ತಾಂತರಿಸತಕ್ಕದ್ದಲ್ಲ.
6) ಈ ಶಿಕ್ಷಣ ಸಂಸ್ಥೆಯವರು ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಜಾರಿಯಲ್ಲಿರುವ ಹಾಗೂ ಆಗಿಂದಾಗ್ಗೆ ಹೊರಡಿಸುವ ಎಲ್ಲಾ ಸರ್ಕಾರಿ ಆದೇಶಗಳು ಹಾಗೂ ನಿಯಮಗಳನ್ನು ಪಾಲಿಸತಕ್ಕದ್ದು. ಕರ್ನಾಟಕ ಶಿಕ್ಷಣ ಮಸೂದೆ 1983 (ಕರ್ನಾಟಕ ಆಕ್ಟ್ ಸಂಖ್ಯೆ 1995) ಇದರಡಿಯಲ್ಲಿ ಬರುವ ಕಾಯ್ದೆಗಳನ್ನು ಮತ್ತು ಅದರಲ್ಲಿ ರಚಿಸಲಾಗಿರುವ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು.



Ist to Vth

7) ಈ ಪ್ರಾಥಮಿಕ ಶಾಲಾ ನೋಂದಾವಣೆಯು ಸರ್ಕಾರಿ ಅಧಿಸೂಚನೆ ಇಡಿ.175/ಪಿಎಂಸಿ/95, ದಿನಾಂಕ: 07–09–1998 ಮ
ದಿನಾಂಕ: 29–12–1998ರ ಪ್ರಕಾರ ಶಾಶ್ವತ ಅನುದಾನ ರಹಿತವಾಗಿರುತ್ತದೆ. (Permanently without Aid).

8) ಕರ್ನಾಟಕ ಖಾಸಗಿ ಶಿಕ್ಷಣ ಸಂಸ್ಥೆಗಳ (ಶಿಸ್ತು ಮತ್ತು ನಿಯಂತ್ರಣ) ನಿಯಮ 1999ರ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು. ಹಾಗೂ ಅವುಗಳಿಗೆ ಬದ್ಧರಾಗಿರತಕ್ಕದ್ದು.

9) ಕರ್ನಾಟಕ ಶಿಕ್ಷಣ ಸಂಸ್ಥೆಗಳು (ವರ್ಗೀಕರಣ, ನಿಯಂತ್ರಣ ಮತ್ತು ಪಠ್ಯವಸ್ತು ನಿಗದೀಕರಣ ಇತ್ಯಾದಿ) ನಿಯಮಾವಳಿಗಳು 1995ರನ್ವಯ ಇಲಾಖೆ ಮತ್ತು ಸರ್ಕಾರ ನಿಗದಿಪಡಿಸಿದ ಪಠ್ಯಪುಸ್ತಕಗಳನ್ನು ಮಾತ್ರ ಬೋಧಿಸತಕ್ಕದ್ದು. ಹಾಗೂ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕ ಹೊರೆಯಾಗದಂತೆ ಕ್ರಮವಹಿಸುವುದು.

10) ಕರ್ನಾಟಕ ಶಿಕ್ಷಣ ಸಂಸ್ಥೆಗಳ (ವರ್ಗೀಕರಣ, ನಿಯಂತ್ರಣ ಮತ್ತು ಪಠ್ಯ ವಸ್ತು ನಿಗದೀಕರಣ ಇತ್ಯಾದಿ) ನಿಯಮಾವಳಿ 1995, ದಿನಾಂಕ: 04–10–1996ರ ನಿಯಮ–10ರಂತೆ ಟರ್ಮ್ ಶುಲ್ಕ, ಬೋಧನಾ ಶುಲ್ಕ, ವಿಶೇಷ ಅಭಿವೃದ್ಧಿ ಶುಲ್ಕಗಳನ್ನು ಮಾತ್ರ ವಸೂಲಿ ಮಾಡತಕ್ಕದ್ದು ಹಾಗೂ ನಿಯಮ 10(04)ರಂತೆ ಶಾಲೆಯಲ್ಲಿ ವಿದ್ಯಾರ್ಥಿ/ಪೋಷಕರಿಂದ ವಸೂಲಿ ಮಾಡುವ ಶುಲ್ಕಗಳ ವಿವರಗಳ ಒಂದು ಬ್ರೋಚರ್ ಅನ್ನು ಶಾಲೆಯ ಸೂಚನಾಫಲಕದಲ್ಲಿ ಕಡ್ಡಾಯವಾಗಿ ಪ್ರಕಟಿಸಿ, ಅದರ ಒಂದು ಪ್ರತಿಯನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ/ಉಪ ನಿರ್ದೇಶಕರಿಗೆ ಸಲ್ಲಿಸತಕ್ಕದ್ದು. ಈ ಬಗ್ಗೆ ಕಾಲದಿಂದ ಕಾಲಕ್ಕೆ ಹೊರಡಿಸುವ ಇಲಾಖೆಯ ಸುತ್ತೋಲೆಯಲ್ಲಿನ ಅಂಶಗಳನ್ನು ಪಾಲಿಸತಕ್ಕದ್ದು.

11) ಸರ್ಕಾರದ ಅಧಿಸೂಚನೆ ಸಂಖ್ಯೆ. ಇಡಿ.30/ವಿವಿಧ/99, ದಿನಾಂಕ: 14–03–2000ರ ಕರ್ನಾಟಕ ಶಿಕ್ಷಣ ಸಂಸ್ಥೆಗಳು (ರೆಗ್ಯುಲೇಷನ್ ಆಫ್ ಸರ್ಟನ್ ಫೀಸ್ ಅಂಡ್ ಡೊನೇಷನ್ಸ್) ನಿಯಮ 1999ರ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು. ಹಾಗೂ ನಿಯಮದಂತೆ ಯಾವುದೇ ವಂತಿಕೆಯನ್ನು ವಸೂಲು ಮಾಡುವಂತಿಲ್ಲ. ಈ ಬಗ್ಗೆ ಕಾಲದಿಂದ ಕಾಲಕ್ಕೆ ಹೊರಡಿಸುವ ಇಲಾಖೆಯ ಸುತ್ತೋಲೆಯಲ್ಲಿನ ಅಂಶಗಳನ್ನು ಪಾಲಿಸತಕ್ಕದ್ದು.

12) ಅನುಮತಿ ಪಡೆದ 2 ತಿಂಗಳೊಳಗಾಗಿ ಕರ್ನಾಟಕ ಶಿಕ್ಷಣ ಕಾಯ್ದೆ 1983 (ಆಕ್ಟ್ 1 ಆಫ್ 1995)ರ ಪ್ರಕಾರ ಸೆಕ್ಷನ್ 36 ರಿಂದ 39ರ ರೀತ್ಯಾ ಹಾಗೂ ಇಡಿ. 131.ವಿವಿಧ/98/ಬೆಂಗಳೂರು, ದಿನಾಂಕ: 04–11–1999 ರಂತೆ ಮಾನ್ಯತೆ ನವೀಕರಣ ಹೊಂದಲು ಸರ್ಕಾರಿ ಅಧಿಸೂಚನೆ ಸಂಖ್ಯೆ. ಇಡಿ.137/ವಿವಿಧ/98/ಬೆಂಗಳೂರು, ದಿನಾಂಕ: 19–05–1999ರ ಪ್ರಕಾರ ಸಕ್ಷಮ ಪ್ರಾಧಿಕಾರಿಗಳಿಗೆ ಅರ್ಜಿ ಸಲ್ಲಿಸತಕ್ಕದ್ದು. ಹಾಗೂ ಶಾಲೆಯನ್ನು ಪ್ರಾರಂಭಿಸಲು ಸಂಸ್ಥೆಯವರು ನಿಗದಿತ ಭದ್ರತಾ ಠೇವಣಿಯನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಆಡಳಿತ ಮಂಡಳಿಯ ಕಾರ್ಯದರ್ಶಿಗಳ ಜಂಟಿ ಖಾತೆಯಲ್ಲಿ ಇಡತಕ್ಕದ್ದು.

13) ಸರ್ಕಾರದ ಅಧಿಸೂಚನೆ ಸಂಖ್ಯೆ. ಇಡಿ.52/ವಿವಿಧ/99, ದಿನಾಂಕ: 02–02–2000ರ ಅನುಬಂಧ–5ರ ನಿಯಮದಂತೆ ಅನುಮತಿ ನೀಡಿದ ಪ್ರತಿಯೊಂದು ತರಗತಿಯಲ್ಲಿ ಮಕ್ಕಳ ಹಾಗೂ ಶಿಕ್ಷಕರ ಅನುಪಾತವನ್ನು ಪಾಲಿಸತಕ್ಕದ್ದು.

14) 1 ರಿಂದ 5ನೇ ತರಗತಿಗೆ ತರಬೇತಿ ಹೊಂದಿದ ಹಾಗೂ ಇಲಾಖೆಯ ನಿಯಮಗಳ ಪ್ರಕಾರ ಅರ್ಹ ವಿದ್ಯಾರ್ಹತೆ ಹೊಂದಿದ ಶಿಕ್ಷಕರನ್ನು ಮಾತ್ರ ನೇಮಿಸತಕ್ಕದ್ದು.

15) ಶಾಲಾ ಕೆಲಸದ ವೇಳೆ ಮತ್ತು ದಿನಗಳನ್ನು ಇಲಾಖೆಯ ನಿಯಮಗಳಂತೆ ಪಾಲಿಸತಕ್ಕದ್ದು.

16) ಶಾಲೆಯನ್ನು ಪ್ರಾರಂಭಿಸಿ ವಿದ್ಯಾರ್ಥಿಗಳ ದಾಖಲಾತಿಯನ್ನು ಶಾಲೆ ನೋಂದಣಿಯಾದ ಅಥವಾ ಶೈಕ್ಷಣಿಕ ವರ್ಷ ಪ್ರಾರಂಭವಾದ ಎರಡು ತಿಂಗಳ ಒಳಗಾಗಿ ಈ ಕಛೇರಿಗೆ ತಿಳಿಸಬೇಕು. ಒಂದು ವೇಳೆ ಶಾಲೆ ತೆರೆಯದಿದ್ದಲ್ಲಿ ಹಾಗೂ ಯಾವುದೇ ಷರತ್ತುಗಳನ್ನು ಪಾಲಿಸದಿದ್ದಲ್ಲಿ ಈ ಆದೇಶ ತನ್ನಿಂದ ತಾನೇ ರದ್ದಾಗುವುದು.

17) ಈಗಾಗಲೇ 1 ರಿಂದ 5ನೇ ತರಗತಿ ಕನ್ನಡ ಮಾಧ್ಯಮ ಇದ್ದಲ್ಲಿ, ಆಂಗ್ಲ ಮಾಧ್ಯಮ ಹಿರಿಯ ಪ್ರಾಥಮಿಕ ಶಾಲೆಯ ಮಂಜೂರಾತಿಯಿಂದ ಕನ್ನಡ ಮಾಧ್ಯಮ ತರಗತಿಗಳಿಗೆ ಯಾವುದೇ ರೀತಿ ಧಕ್ಕೆ ಬಾರದಂತೆ ನೋಡಿಕೊಳ್ಳುವುದು.

18) ಸರ್ಕಾರದ ಸುತ್ತೋಲೆ ಸಂಖ್ಯೆ. ಇಡಿ.27/ಎಸ್.ಇ.ಪಿ.03, ದಿನಾಂಕ: 13–02–2003ರ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸಿ ಶಾಲೆಯಲ್ಲಿ ನೇಮಕಗೊಂಡಿರುವ ಶಿಕ್ಷಕರ/ಸಿಬ್ಬಂದಿ ಸೇವಾ ವಿವರಗಳನ್ನು ನಿಯಮಾನುಸಾರ ದಾಖಲು ಮಾಡಿ ಕಡ್ಡಾಯವಾಗಿ ನಿರ್ವಹಿಸುವುದು.

19) ಪ್ರಸ್ತಾವನೆಯಲ್ಲಿ ಸಲ್ಲಿಸಿರುವ ದಾಖಲೆಗಳು ಸುಳ್ಳು ದಾಖಲೆಗಳೆಂದು ಕಂಡುಬಂದಲ್ಲಿ ಈ ನೋಂದಣಿಯನ್ನು ರದ್ದುಪಡಿಸಲಾಗುವುದು. ಪ್ರತಿ ತರಗತಿಯಲ್ಲಿ ವಿದ್ಯಾರ್ಥಿಗಳ ಸಂಖ್ಯೆ 50ಕ್ಕೆ ಮೀರಬಾರದು.

20) ಅನುಮತಿ ನೀಡಿದ 5 ವರ್ಷಗಳವರೆಗೆ ಶಾಲಾ ಸ್ಥಳಾಂತರ ಮತ್ತು ಹಸ್ತಾಂತರಕ್ಕೆ ಅವಕಾಶವಿರುವುದಿಲ್ಲ.

21) ಸರ್ಕಾರದ ಪತ್ರ ಸಂಖ್ಯೆ. ಇಡಿ.122.ಎಸ್.ಇ.ಎಸ್.2007, ಬೆಂಗಳೂರು ದಿನಾಂಕ: 17–05–2007ರ ಪತ್ರದಲ್ಲಿನ ಷರತ್ತುಗಳನ್ನು ಪೂರೈಸತಕ್ಕದ್ದು.

22) 1 ರಿಂದ 5ನೇ ತರಗತಿವರೆಗೆ ಯಾವ ಮಾಧ್ಯಮದಲ್ಲಿ ನೋಂದಣಿ ನೀಡಲಾಗಿದೆಯೋ ಅದೇ ಮಾಧ್ಯಮದಲ್ಲಿ ಶಾಲೆಯನ್ನು ನಡೆಸತಕ್ಕದ್ದು.

23) ಸರ್ಕಾರದ ಅಧಿಸೂಚನೆ ಸಂಖ್ಯೆ. ಇಡಿ.369.ಪಿಜಿಸಿ.2014, ದಿನಾಂಕ: 11–11–2014 ಹಾಗೂ ಸಂಬಂಧಿತ ತಿದ್ದುಪಡಿ ಆದೇಶದಲ್ಲಿ ಸೂಚಿಸಿರುವಂತೆ ಶಾಲೆಯ ಮೂಲಭೂತ ಸೌಲಭ್ಯ ಹಾಗೂ ಇತರೆ ಷರತ್ತುಗಳನ್ನು ಕಡ್ಡಾಯವಾಗಿ ಪೂರೈಸತಕ್ಕದ್ದು. ಹಾಗೂ ಈ ಕುರಿತು ಪ್ರಥಮ ಮಾನ್ಯತೆ ನೀಡುವ ಸಂದರ್ಭದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳು ಖಚಿತಪಡಿಸಿಕೊಂಡ ನಂತರವೇ ಮಾನ್ಯತೆಯನ್ನು ನೀಡುವುದು.

24) ಶಾಲೆಗಳಲ್ಲಿ ವಿದ್ಯಾರ್ಥಿಗಳ ಸುರಕ್ಷತೆಯ ಬಗ್ಗೆ ಶಿಕ್ಷಣ ಇಲಾಖೆ ಮತ್ತು ಗೃಹ ಇಲಾಖೆಗಳು ಹೊರಡಿಸಿರುವ ಮಾರ್ಗಸೂಚಿಯನ್ವಯ ಎಲ್ಲಾ ಭದ್ರತಾ ಕ್ರಮಗಳನ್ನು ಕೈಗೊಳ್ಳಬೇಕು ಹಾಗೂ ಅಗತ್ಯ ಎಲ್ಲಾ ಭದ್ರತಾ ಉಪಕರಣಗಳನ್ನು ಕಡ್ಡಾಯವಾಗಿ ಅಳವಡಿಸಿರಬೇಕು.

25) ಕ್ಷೇತ್ರ ಶಿಕ್ಷಣಾಧಿಕಾರಿಗಳು ಶಾಲೆಯ ನೋಂದಣಿ ನಿಯಮಗಳಂತೆ ನಡೆಯುತ್ತಿರುವ ಬಗ್ಗೆ ಸೂಕ್ತ ನಿಗಾವಹಿಸತಕ್ಕದ್ದು.

26) ನೋಂದಣಿಯ ಯಾವುದೇ ಷರತ್ತುಗಳನ್ನು ಉಲ್ಲಂಘಿಸಿರುವುದು ಕಂಡುಬಂದಲ್ಲಿ ಏಕಪಕ್ಷೀಯವಾಗಿ ನೋಂದಣಿಯನ್ನು ಹಿಂಪಡೆಯುವ ಅಧಿಕಾರವನ್ನು ಇಲಾಖೆಯು ಕಾಯ್ದಿರಿಸಿಕೊಂಡಿದೆ.

27) ಕರ್ನಾಟಕ ಶಿಕ್ಷಣ ಮಸೂದೆಯ ನಿಯಮಗಳಂತೆ ಶಾಲೆಗೆ ಬೇಕಾದ ಮೂಲಭೂತ ಸೌಲಭ್ಯಗಳಾದ ಪೀಠೋಪಕರಣ, ಪಾಠೋಪಕರಣ, ಗ್ರಂಥಾಲಯ ಮುಂತಾದ ಸೌಲಭ್ಯಗಳನ್ನು ಒಂದು ವರ್ಷದಲ್ಲಿ ಹಾಗೂ ಸುಸಜ್ಜಿತವಾದ ಆಟದ ಮೈದಾನ, ಶಾಲಾ ಕಟ್ಟಡವನ್ನು ಮೂರು ವರ್ಷದಲ್ಲಿ ಒದಗಿಸಿಕೊಳ್ಳತಕ್ಕದ್ದು.

ಉಪ ನಿರ್ದೇಶಕರು,
ಸಾರ್ವಜನಿಕ ಶಿಕ್ಷಣ ಇಲಾಖೆ,
ಚಾಮರಾಜನಗರ.

ಗೆ,

1) ಕಾರ್ಯದರ್ಶಿಗಳು, ಕ್ರೈಸ್ಟ್ ಸಿ.ಎಂ.ಐ. ಪಬ್ಲಿಕ್ ಆಂಗ್ಲ ಮಾಧ್ಯಮ ಹಿರಿಯ ಪ್ರಾಥಮಿಕ ಶಾಲೆ, ಚಾವರ ಭವನ, ಗುಂಡ್ಲುಪೇಟೆ ಟೌನ್, ಚಾಮರಾಜನಗರ ಜಿಲ್ಲೆ.
2) ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಂಡ್ಲುಪೇಟೆ – ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಿರುವ ಬಗ್ಗೆ ಶಾಲೆ ಪ್ರಾರಂಭವಾದ ಎರಡು ತಿಂಗಳೊಳಗೆ ತಪ್ಪದೇ ವರದಿ ಸಲ್ಲಿಸುವುದು ಹಾಗೂ ಈ ಬಗ್ಗೆ ಆಗಾಗ್ಗೆ ಭೇಟಿ ನೀಡಿ ಪರಿಶೀಲಿಸುವುದು.
3) ಕಛೇರಿ ಪ್ರತಿ.

ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆ,

ಉಪನಿರ್ದೇಶಕರ ಕಚೇರಿ ಸಾರ್ವಜನಿಕ ಶಿಕ್ಷಣ ಇಲಾಖೆ, ಚಾಮರಾಜನಗರ ಜಿಲ್ಲೆ, ಚಾಮರಾಜನಗರ

ಸದರಿ ಶಿಕ್ಷಣ ಸಂಸ್ಥೆಯನ್ನು ಈ ಕಛೇರಿಯಲ್ಲಿನ ಶೈಕ್ಷಣಿಕ ಸಂಸ್ಥೆಗಳ ನೋಂದಣಿ ವಹಿಯಲ್ಲಿ ನೊಂದಾಯಿಸಲಾಗಿದೆ. ಕ್ರಮ ಸಂಖ್ಯೆ / ಪುಟ ಸಂಖ್ಯೆ / ವಾಲ್ಯೂಂ ಸಂಖ್ಯೆ : 13/13/03

ಮಂಜೂರಾತಿ ನೀಡಿದ ಕಛೇರಿ ವಿಳಾಸ: ದಿನಾಂಕ: **28-May-2020**

[ನಿಯಮ 3 ಉಪನಿಯಮ 5(ಬಿ)

ಪ್ರಮಾಣ ಪತ್ರ ಸಂಖ್ಯೆ: **23773/2020-21** P 827

**( CHAVARA BHAVANA,GUNDLUPETE TOWN )**

**CHAMARAJANAGARA**

ಇವರ ಗೌವರ್ನಿಂಗ್ ಕೌನ್ಸಿಲ್ ಈ ಶಿಕ್ಷಣ ಸಂಸ್ಥೆಯ ಹೊಸ ಪ್ರಾಥಮಿಕ ಶಾಲೆಯನ್ನು ಕರ್ನಾಟಕ ಶಿಕ್ಷಣ ಕಾಯ್ದೆ 1983 [ಕರ್ನಾಟಕ ಆಕ್ಟ್ 1995] ಸಕ್ಷನ್ 31ರಂತೆ ಈ ಕೆಳಕಂಡ **QUALITY EDUCATION FOR THE ECONOMICALLY WEAKER SECTION STUDNETS...** ಪ್ರಾರಂಭಿಸಲು ಮಂಜೂರಾತಿ ನೀಡಿ ನೊಂದಾಯಿಸಲಾಗಿದೆ ಎಂದು ಪ್ರಮಾಣೀಕರಿಸಲಾಗಿದೆ.

1. ಅರ್ಜಿ ಸಂಖ್ಯೆ : **201317**
2. ಕ್ರಮ ಸಂಖ್ಯೆ : **23773**
3. ಶಾಲೆಯ ಹೆಸರು ಮತ್ತು ವಿಳಾಸ : **( CHAVARA BHAVANA,GUNDLUPETE TOWN )**
4. ಅನುಮತಿ ನೀಡಿದ ತರಗತಿ : **Upgradation from 6 to 8**
5. ಶೈಕ್ಷಣಿಕ ವರ್ಷ : **2020-21**

6 ಅನುಮತಿ ನೀಡಿದ ಮಾಧ್ಯಮ : **English**

ಷರತ್ತುಗಳು

1. ಈ ನೋಂದಾವಣಿಯು ನಿಯಮ 3[5][4]ಕ್ಕೆ ಒಳಪಟ್ಟಿರುತ್ತದೆ.
2. ಗೌವರ್ನಿಂಗ್ ಕೌನ್ಸಿಲ್ ಇವರು ನಿಯಮ 4[4]ರಲ್ಲಿ ತಿಳಿಸಿರುವ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಬೇಕು.
3. ಶಾಲಾ ನಿವೇಶನ, ವಿಸ್ತೀರ್ಣ, ಕಟ್ಟಡ, ಪೀಠೋಪಕರಣಗಳು, ಸಿಬ್ಬಂದಿ ವರ್ಗ ಆರ್ಥಿಕ ಅನುಕೂಲತೆಗಳು ಮುಂತಾದವುಗಳನ್ನು ಒದಗಿಸುವ ಷರತ್ತಿಗೆ ಒಳಪಟ್ಟಿರುತ್ತದೆ. ಸದರಿ ಶಿಕ್ಷಣ ಸಂಸ್ಥೆಯು ಯಾವುದೇ ಸಂದರ್ಭದಲ್ಲಿಯೂ ಸರ್ಕಾರದ ಪೂರ್ವಾನುಮತಿ ಇಲ್ಲದೆ ಹೆಚ್ಚಿನ ವಿಭಾಗಗಳನ್ನು ತೆರೆಯುವಂತಿಲ್ಲ.
4. ಶಾಲೆಯನ್ನು ಮಂಜೂರು ಮಾಡಿರುವ ಮಾಧ್ಯಮದಲ್ಲಿ ಮತ್ತು ಅದೇ ಸ್ಥಳದಲ್ಲಿ ಮಾತ್ರ ತೆರೆಯತಕ್ಕದ್ದು ಹಾಗೂ ಯಾವುದೇ ಕಾರಣಕ್ಕೂ ಸ್ಥಳ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ. ಯಾವ ಆಡಳಿತ ಮಂಡಳಿಗೆ ಶಾಲೆ ನಡೆಸಲು ಅನುಮತಿ ನೀಡಲಾಗಿದೆಯೋ ಅದೇ ಮಂಡಳಿಯು ಅದೇ ಸ್ಥಳದಲ್ಲಿಯೇ ಮತ್ತು ಅದೇ ಹೆಸರಿನಲ್ಲಿ ನಡೆಸತಕ್ಕದ್ದು.
5. ಈ ಶಿಕ್ಷಣ ಸಂಸ್ಥೆಯವರು ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಜಾರಿಯಲ್ಲಿರುವ ಹಾಗೂ ಆಗಿಂದಾಗ್ಗೆ ಹೊರಡಿಸುವ ಎಲ್ಲಾ ಸರ್ಕಾರಿ ಆದೇಶಗಳು ಹಾಗೂ ನಿಯಮಗಳನ್ನು ಪಾಲಿಸತಕ್ಕದ್ದು. ಕರ್ನಾಟಕ ಶಿಕ್ಷಣ ಮಸೂದೆ 1983 [ಕರ್ನಾಟಕ ಆಕ್ಟ್ ಸಂಖ್ಯೆ:1:96] ಇದರಡಿಯಲ್ಲಿ ಬರುವ ಕಾಯ್ದೆಗಳನ್ನು ಮತ್ತು ಅದರಡಿಯಲ್ಲಿ ರಚಿಸಲಾಗಿರುವ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು.
6. ಈ ಪ್ರೌಢಶಾಲಾ ನೊಂದಾವಣಿಯಂತೆ ಸರ್ಕಾರಿ ಅಧಿಸೂಚನೆ ಸಂ: ಇಡಿ:175:ಪಿಎಂಸಿ:95, ದಿ:07-09-1998 ಮತ್ತು ದಿ:29-12-1998ರ ಪ್ರಕಾರ ಶಾಶ್ವತ ಅನುದಾನ ರಹಿತವಾಗಿರುತ್ತದೆ. ಆಡಳಿತ ಮಂಡಳಿಯು ಸರ್ಕಾರದಿಂದ ಯಾವುದೇ ಅನುದಾನವನ್ನು ಬಯಸುವುದಿಲ್ಲವೆಂದು ರೂ. 10-00 ಛಾಪಾ ಕಾಗದದಲ್ಲಿ ನೋಟರಿಯವರ ಮುಂದೆ ಪ್ರಮಾಣೀಕರಿಸಿದ ಒಪ್ಪಿಗೆ ಪತ್ರವನ್ನು ನೀಡುವುದು.
7. ಕರ್ನಾಟಕ ಖಾಸಗಿ ಶಿಕ್ಷಣ ಸಂಸ್ಥೆಗಳು [ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ, ಸೇವಾ ಷರತ್ತು ಮತ್ತು ನಿಬಂಧನೆಗಳು] ನಿಯಮ 1999ರ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು.
8. ಇಲಾಖೆ ಹಾಗೂ ಸರ್ಕಾರ ನಿಗದಿಪಡಿಸಿದ ಪಠ್ಯಪುಸ್ತಕ, ಪರೀಕ್ಷಾ ಕ್ರಮಗಳನ್ನು ಮಾತ್ರ ತಪ್ಪದೇ ಅಳವಡಿಸತಕ್ಕದ್ದು.

ಮುಂದುವರೆದಿದೆ...

9. ಅನುಮತಿ ನೀಡಿದ ಪ್ರತಿಯೊಂದು ತರಗತಿಯಲ್ಲಿ ಕನಿಷ್ಠ ಹಾಜರಾತಿ 25 ಇರತಕ್ಕದ್ದು.

10. ತರಬೇತಿ ಹೊಂದಿದ ಹಾಗೂ ಇಲಾಖೆಯ ನಿಯಮಗಳ ಪ್ರಕಾರ ವಿದ್ಯಾರ್ಹತೆ ಹೊಂದಿದ ಶಿಕ್ಷಕರನ್ನು ಮಾತ್ರ ನೇಮಿಸತಕ್ಕದ್ದು. ಕರ್ನಾಟಕ ಶಿಕ್ಷಣ ಮಸೂದೆ ಅನುಚ್ಛೇದ 8ರ ಅಡಿಯಲ್ಲಿ ಉಪಬಂಧ 36-39ರಂತೆ ನೊಂದಾಯಿಸಿದ ಎಲ್ಲಾ ಶಾಲೆಗಳ ಮಾನ್ಯತೆ ಹಾಗೂ ತಾತ್ಕಾಲಿಕ ಮಾನ್ಯತೆ ವ್ಯಾಪ್ತಿಗೆ ಬರುವುದು.

11. ಪ್ರತಿ ವರ್ಷವೂ ವಿದ್ಯಾರ್ಥಿಗಳ ವೈದ್ಯಕೀಯ ಪರೀಕ್ಷೆಯನ್ನು ನಿಯಮಾನುಸಾರ ಮಾಡಿಸತಕ್ಕದ್ದು.

12. ಶಾಲೆಯನ್ನು ಪ್ರಾರಂಭಿಸಲು ಸಂಸ್ಥೆಯವರು ಭದ್ರತಾ ಠೇವಣಿಯನ್ನು ಜಿಲ್ಲಾ ಉಪನಿರ್ದೇಶಕರು ಹಾಗೂ ಆಡಳಿತ ಮಂಡಳಿಯ ಜಂಟಿ ಖಾತೆಯಲ್ಲಿ ಇರಿಸತಕ್ಕದ್ದು.

13. ಕರ್ನಾಟಕ ಶಿಕ್ಷಣ ಮಸೂದೆ ನಿಯಮಗಳ ಪ್ರಕಾರ ಶಾಲೆಗೆ ಬೇಕಾದ ಪೀಠೋಪಕರಣ, ಪಾಠೋಪಕರಣ, ಗ್ರಂಥಾಲಯ ಪುಸ್ತಕಗಳು, ಆಟದ ಮೈದಾನ, ಶಾಲಾ ಕಟ್ಟಡ ಮುಂತಾದ ಸೌಲಭ್ಯಗಳನ್ನು ಒಂದು ವರ್ಷದಲ್ಲಿ ಒದಗಿಸಿಕೊಳ್ಳತಕ್ಕದ್ದು. ಇಲ್ಲದಿದ್ದಲ್ಲಿ ನೋಂದಣಿಯನ್ನು ರದ್ದುಗೊಳಿಸಲಾಗುವುದು.

14. ಶಾಲೆ ತೆರೆದ ಬಗ್ಗೆ ಹಾಗೂ ವಿದ್ಯಾರ್ಥಿಗಳ ದಾಖಲಾತಿ ಮಾಹಿತಿಯನ್ನು ಶಾಲೆ ನೋಂದಣಿಯಾದ ಅಥವಾ ಶೈಕ್ಷಣಿಕ ವರ್ಷ ಪ್ರಾರಂಭದ ಮೂರು ತಿಂಗಳ ಒಳಗಾಗಿ ಈ ಕಛೇರಿಗೆ ತಿಳಿಸಬೇಕು. ಒಂದು ವೇಳೆ ಶಾಲೆ ತೆರೆಯದಿದ್ದಲ್ಲಿ ಹಾಗೂ ಯಾವುದೇ ಷರತ್ತುಗಳನ್ನು ಪಾಲಿಸದಿದ್ದಲ್ಲಿ ಈ ಆದೇಶ ತಾನಾಗೇ ರದ್ದಾಗುವುದು.

15. ಶಾಲೆಯಲ್ಲಿ ಹೆಣ್ಣು ಮಕ್ಕಳಿಗೆ ಮತ್ತು ಗಂಡು ಮಕ್ಕಳಿಗೆ ಪ್ರತ್ಯೇಕವಾದ ಶೌಚಾಲಯದ ವ್ಯವಸ್ಥೆಯನ್ನು ಕಡ್ಡಾಯವಾಗಿ ಒದಗಿಸಬೇಕು ಮತ್ತು ಶುದ್ಧ ಕುಡಿಯುವ ನೀರಿನ ವ್ಯವಸ್ಥೆಯನ್ನು ಒದಗಿಸಬೇಕು.

16. ಪ್ರಥಮ ಮಾನ್ಯತೆಗಾಗಿ ಉಪನಿರ್ದೇಶಕರಿಗೆ ಪ್ರಸ್ತಾವನೆ ಸಲ್ಲಿಸುವುದು. ಉಪನಿರ್ದೇಶಕರು ಶಿಕ್ಷಣ ಕಾಯ್ದೆ ಮತ್ತು ಸರ್ಕಾರದ ಆದೇಶ ದಿನಾಂಕ: 30-09-2007ರ ಅನುಬಂಧ-3ರ ಚಕ್ ಲಿಸ್ಟ್ ಮಾಹಿತಿ ಪಡೆದು ಈ ಆಧಾರದ ಮೇಲೆ ಶಾಲೆ ಪ್ರಾರಂಭಿಸಿದ ಮೂರು ತಿಂಗಳೊಳಗೆ ಕಡ್ಡಾಯವಾಗಿ ಪ್ರಥಮ ಮಾನ್ಯತೆ ನೀಡುವುದು. ನಿಗದಿತ ಅವಧಿಯೊಳಗೆ ಮಾನ್ಯತೆ ಪಡೆಯದಿದ್ದಲ್ಲಿ ನೋಂದಣಿ ತಂತಾನೆ ರದ್ದಾಗುತ್ತದೆ.

17. ಶಾಲೆಯ ಕಟ್ಟಡ ಸುರಕ್ಷತೆಯ ಬಗ್ಗೆ ಬೆಂಕಿ, ಬಿರುಗಾಳಿ, ವಿದ್ಯುತ್ ಅಪಘಾತ ಮುಂತಾದ ಅವಘಡಗಳಿಂದ ಸುರಕ್ಷಿತವಾಗಿರುವ ಬಗ್ಗೆ ಪರಿಶೀಲಿಸಿ ಖಚಿತಪಡಿಸಿಕೊಳ್ಳುವುದು. ಶಾಲಾ ಆವರಣದ 100 ಗಜಗಳ ಅಂತರದಲ್ಲಿ ತಂಬಾಕು ಉತ್ಪನ್ನಗಳ ಮಾರಾಟವನ್ನು ನಿಷೇಧಿಸಿದೆ ಎಂದು ಶಾಲಾ ಮುಂಭಾಗದಲ್ಲಿ ಪ್ರಕಟಣೆ ನೀಡುವುದು.

18. ಶಾಲಾ ಆಡಳಿತ ಮಂಡಳಿ ಯಾವುದೇ ತಪ್ಪು ಮಾಹಿತಿಗಳನ್ನು ನೀಡಿದ್ದಲ್ಲಿ ನೋಂದಣಿಯನ್ನು ರದ್ದುಪಡಿಸುವ ಅಧಿಕಾರ ಇಲಾಖೆ ಕಾಯ್ದಿರಿಸಿಕೊಂಡಿದೆ.

19. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 369 ಪಿ.ಜಿ.ಸಿ 2014, ದಿನಾಂಕ: 11.11.2014ರಂತೆ ಮತ್ತು ಈ ಕಛೇರಿ ಸುತ್ತೋಲೆ ದಿನಾಂಕ: 14.11.2014ರಂತೆ ಷರತ್ತುಗಳನ್ನು ಪಾಲಿಸಿರುವುದನ್ನು ಖಚಿತಪಡಿಸಿಕೊಳ್ಳತಕ್ಕದ್ದು.

20. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 709 ಪಿ.ಜಿ.ಸಿ 2017, ದಿನಾಂಕ: 07.03.2018ರಂತೆ ಮತ್ತು ಈ ಕಛೇರಿ ಸುತ್ತೋಲೆ ದಿನಾಂಕ: 26.03.2018ರಂತೆ ಷರತ್ತುಗಳನ್ನು ಪಾಲಿಸಿರುವುದನ್ನು ಖಚಿತಪಡಿಸಿಕೊಳ್ಳತಕ್ಕದ್ದು.

ಉಪನಿರ್ದೇಶಕರು,
ಸಾರ್ವಜನಿಕ ಶಿಕ್ಷಣ ಇಲಾಖೆ,
ಚಾಮರ್‍ಾಜನಗರ

1. ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ , ಗುಂಡ್ಲುಪೇಟೆ
2. ಕಾರ್ಯದರ್ಶಿಗಳು, (CHAVARA BHAVANA,GUNDLUPETE TOWN)
3. ಕಛೇರಿ ಪ್ರತಿ.

ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-560001.

ಸಂಖ್ಯೆ:ಸಿ7(5) ಪ್ರಾಶಿಅ: ಕ್ರೈಸ್ಟ್ ಸಿಎಂಐ:ಶಾ:ಹೆ: ತಿದ್ದುಪಡಿ: 19 / 2021-22 ದಿನಾಂಕ:29-09-2021

**ಜ್ಞಾಪನಾ**

**ವಿಷಯ:** ಚಾವರ ಭವನ ಗುಂಡ್ಲುಪೇಟೆ ಟೌನ್ ಈ ಶಾಲೆಯ ಹೆಸರನ್ನು ಕ್ರೈಸ್ಟ್ ಸಿ.ಎಂ.ಐ. ಪಬ್ಲಿಕ್ ಸ್ಕೂಲ್, ಚಾವರ ಭವನ, ಗುಂಡ್ಲುಪೇಟೆ ಟೌನ್ ಎಂದು ಶಾಲೆಯ ಹೆಸರನ್ನು ತಿದ್ದುಪಡಿ ಮಾಡಿಕೊಡಲು ಕೋರಿರುವ ಬಗ್ಗೆ.

**ಉಲ್ಲೇಖ:** 1.ಸರ್ಕಾರದ ಆದೇಶ ಸಂಖ್ಯೆ ಇಡಿ 28 ಪಿಜಿಸಿ 99 ದಿನಾಂಕ 27-02-1999.
2.ಉಪ ನಿರ್ದೇಶಕರು, ಸಾಶಿಇ, ಚಾಮರಾಜನಗರ ಜಿಲ್ಲೆ, ರವರ ಕಛೇರಿ ಪತ್ರ ಸಂಖ್ಯೆ:ಬಿ2:95:ಹೊಶಾನೋ:09/2020-21 ದಿನಾಂಕ:14-09-2021

*** ***

**ಪ್ರಸ್ತಾವನೆ:**

ವಿಷಯಕ್ಕೆ ಸಂಬಂಧಿಸಿದಂತೆ, ಸಿ.ಎಂ.ಐ ಕ್ರೈಸ್ಟ್ ಶೈಕ್ಷಣಿಕ ಮತ್ತು ಚಾರಿಟಬಲ್ ಟ್ರಸ್ಟ್ (ರಿ) ಚಾವರ ಭವನ ಗುಂಡ್ಲುಪೇಟೆ ಟೌನ್, ಚಾಮರಾಜನಗರ ಜಿಲ್ಲೆ, ಈ ಆಡಳಿತ ಮಂಡಳಿಯಿಂದ ನಡೆಯುತ್ತಿರುವ ಕ್ರೈಸ್ಟ್ ಸಿ.ಎಂ.ಐ ಪಬ್ಲಿಕ್ ಆಂಗ್ಲ ಮಾಧ್ಯಮ ಹಿರಿಯ ಪ್ರಾಥಮಿಕ ಶಾಲೆ, ಚಾವರ ಭವನ, ಗುಂಡ್ಲುಪೇಟೆ ಟೌನ್ ಚಾಮರಾಜನಗರ ಜಿಲ್ಲೆ, ಈ ಶಾಲೆಗೆ 6-8ನೇ ತರಗತಿ ಪ್ರಾರಂಭಿಸಲು ಅನುಮತಿ ನೀಡಿದ ಆನ್‌ಲೈನ್ ಆದೇಶದ ಪ್ರತಿಯಲ್ಲಿ ಶಾಲೆಯ ಹೆಸರು ಚಾವರ ಭವನ ಗುಂಡ್ಲುಪೇಟೆ ಟೌನ್ ಎಂದು ನಮೂದಾಗಿರುತ್ತದೆ. ಚಾವರ ಭವನ ಗುಂಡ್ಲುಪೇಟೆ ಟೌನ್ ಎಂಬುದರ ಬದಲಾಗಿ ಕ್ರೈಸ್ಟ್ ಸಿ.ಎಂ.ಐ ಪಬ್ಲಿಕ್ ಸ್ಕೂಲ್, ಚಾವರ ಭವನ, ಗುಂಡ್ಲುಪೇಟೆ ಟೌನ್, ಚಾಮರಾಜನಗರ ಜಿಲ್ಲೆ, ಎಂಬುದಾಗಿ ಈ ಶಾಲೆಯ ಹೆಸರು ತಿದ್ದುಪಡಿಗಾಗಿ ಉಲ್ಲೇಖ-2ರಲ್ಲಿ ಸಲ್ಲಿಸಿರುವ ಪ್ರಸ್ತಾವನೆಯಲ್ಲಿನ ಶಿಫಾರಸ್ಸನ್ನು ಪರಿಗಣಿಸಿ ಆದೇಶಿಸಲಾಗಿದೆ.

**ಆದೇಶ:**

ಕ್ರೈಸ್ಟ್ ಸಿ.ಎಂ.ಐ ಶೈಕ್ಷಣಿಕ ಮತ್ತು ಚಾರಿಟಬಲ್ ಟ್ರಸ್ಟ್ (ರಿ) ಚಾವರ ಭವನ ಗುಂಡ್ಲುಪೇಟೆ ಟೌನ್, ಚಾಮರಾಜನಗರ ಜಿಲ್ಲೆ, ಈ ಆಡಳಿತ ಮಂಡಳಿಯಿಂದ ನಡೆಯುತ್ತಿರುವ ಚಾವರ ಭವನ ಗುಂಡ್ಲುಪೇಟೆ ಟೌನ್ ಚಾಮರಾಜನಗರ ಜಿಲ್ಲೆ, ಈ ಶಾಲೆಯ ಹೆಸರನ್ನು ಕ್ರೈಸ್ಟ್ ಸಿ.ಎಂ.ಐ. ಪಬ್ಲಿಕ್ ಶಾಲೆ, ಚಾವರ ಭವನ, ಗುಂಡ್ಲುಪೇಟೆ ಟೌನ್ ಚಾಮರಾಜನಗರ ಜಿಲ್ಲೆ, ಎಂದು ತಿದ್ದುಪಡಿ ಮಾಡಲು ಕೆಳಕಂಡ ಷರತ್ತುಗಳನ್ನು ವಿಧಿಸಿ ಅನುಮತಿ ನೀಡಿದೆ.

**ಷರತ್ತುಗಳು:**

1. ಈ ಆದೇಶ ಜಾರಿಯಾದ ತಕ್ಷಣವೇ ಶಾಲೆಯ ಹಳೆಯ ಹೆಸರನ್ನು ಅದರ ವಿಳಾಸದೊಂದಿಗೆ ರದ್ದುಪಡಿಸತಕ್ಕದ್ದು.
2. ಉಲ್ಲೇಖ-1ರ ಸರ್ಕಾರದ ಆದೇಶದಂತೆ ಸಂಬಂಧಿಸಿದ ಉಪ ನಿರ್ದೇಶಕರು ಶಾಲೆಯ ಬದಲಾದ ಹೆಸರು ಹಾಗೂ ವಿಳಾಸದ ಬಗ್ಗೆ ಮತ್ತು ಬದಲಾದ ಹೆಸರಿನ ಶಾಲೆಯ ಆಡಳಿತ ಮಂಡಳಿಯು ಕರ್ನಾಟಕ ಸೊಸೈಟೀಸ್ ರಿಜಿಸ್ಟ್ರೇಷನ್ ಕಾಯ್ದೆಯಡಿಯಲ್ಲಿನ ರಿಜಿಸ್ಟ್ರೇಷನ್ ಸಂಖ್ಯೆ ವಿಳಾಸ ಶಿಕ್ಷಣ ಕಾಯ್ದೆಯಡಿಯಲ್ಲಿನ ರಿಜಿಸ್ಟ್ರೇಷನ್ ಸಂಖ್ಯೆ ಸದಸ್ಯರುಗಳ ಹೆಸರು ಈ ವಿವರಣೆಗಳನ್ನು ಒಳಗೊಂಡ ಆದೇಶವನ್ನು ಹೊರಡಿಸತ್ತಕ್ಕದ್ದು.

3. ಆಡಳಿತ ದೃಷ್ಟಿಯಿಂದ ಶಾಲೆಯ ಹೆಸರನ್ನು ಒಂದು ಬಾರಿ ಮಾತ್ರ ಬದಲಾಯಿಸತಕ್ಕದ್ದು ಮತ್ತೆ ಬದಲಾವಣೆಗೆ ಪ್ರಸ್ತಾವನೆ ಸಲ್ಲಿಸಿದಲ್ಲಿ ಅದನ್ನು ಪರಿಗಣಿಸತಕ್ಕದ್ದಲ್ಲ.
4. ಹಳೇ ಶಾಲೆಯ ಹೆಸರಿನಲ್ಲಿ ಯಾವುದೇ ಕಾರಣಕ್ಕೂ ಆಡಳಿತ ಮಂಡಳಿಯವರು ಶಾಲೆಯನ್ನು ನಡೆಸಬಾರದು.
5. ಕಛೇರಿಯ ವ್ಯವಹಾರಗಳಿಗೆ ಶಾಲಾ ಹೆಸರು ಬದಲಾಯಿಸಿದ ದಿನಾಂಕದಿಂದ ಹೊಸದಾಗಿ ನಾಮಕರಣ ಮಾಡಿರುವ ಹೆಸರು ಚಾಲ್ತಿಯಲ್ಲಿರುತ್ತದೆ.
6. ಹೊಸ ಹೆಸರಿನಲ್ಲಿ ಶಾಲೆ ನಡೆಸುತ್ತಿರುವ ಬಗ್ಗೆ ಬದಲಾವಣೆ ಜಾರಿಗೆ ಬಂದ ತಕ್ಷಣ ಉಪ ನಿರ್ದೇಶಕರು / ಕ್ಷೇತ್ರ ಶಿಕ್ಷಣಾಧಿಕಾರಿಗಳು ರವರು ಈ ಕಛೇರಿಗೆ ಲಿಖಿತವಾಗಿ ತಿಳಿಸತಕ್ಕದ್ದು.
7. ಹೆಸರು ಬದಲಾವಣೆ ಬಗ್ಗೆ ಸ್ಥಳೀಯ ಪತ್ರಿಕೆಗಳಲ್ಲಿ ಸಾರ್ವಜನಿಕರ ಗಮನಕ್ಕೆ ತರಲು ಆಡಳಿತ ಮಂಡಳಿಗೆ ಸೂಚಿಸಿ, ಅದೇ ಪ್ರಕಟಣೆಯಲ್ಲಿ ಹಿಂದಿನ ಹೆಸರು, ಹಿಂದಿನ ವಿಳಾದಲ್ಲಿ ಶಾಲೆಯನ್ನು ಮುಚ್ಚಿರುವ ಹಾಗೂ ಹೆಸರು ಬದಲಾವಣೆ ಆಗಿರುವ ಬಗ್ಗೆ ಸಾರ್ವಜನಿಕರಿಗೆ ತಿಳಿಯಪಡಿಸುವುದು.

ನಿರ್ದೇಶಕರು
(ಪ್ರಾಥಮಿಕ ಶಿಕ್ಷಣ)

ಗೆ:
ಉಪ ನಿರ್ದೇಶಕರು,
ಸಾರ್ವಜನಿಕ ಶಿಕ್ಷಣ ಇಲಾಖೆ
ಚಾಮರಾಜನಗರ ಜಿಲ್ಲೆ.

ಪ್ರತಿಯನ್ನು:

1. ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಂಡ್ಲುಪೇಟೆ ತಾಲ್ಲೂಕು, ಚಾಮರಾಜನಗರ ಜಿಲ್ಲೆ.
2. ಕಾರ್ಯದರ್ಶಿ, ಸಿ.ಎಂ.ಐ.ಕ್ರೈಸ್ಟ್ ಎಜುಕೇಷನಲ್ ಅಂಡ್ ಚಾರಿಟಬಲ್ ಟ್ರಸ್ಟ್ ಗುಂಡ್ಲುಪೇಟೆ ತಾಲ್ಲೂಕು, ಚಾಮರಾಜನಗರ ಜಿಲ್ಲೆ.
3. ಕಛೇರಿ ಪ್ರತಿ.

# ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆ

## ಆಯುಕ್ತರ ಕಚೇರಿ, ಹೊಸ ಸಾರ್ವಜನಿಕ ಕಚೇರಿಗಳು, ನೃಪತುಂಗ ರಸ್ತೆ, ಬೆಂಗಳೂರು

ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರ ಕಛೇರಿ,

**CHAMARAJANAGARA ಜಿಲ್ಲೆ.**

**ಪ್ರಥಮ ಮಾನ್ಯತೆ / ಮಾನ್ಯತೆ ನವೀಕರಣ ಪ್ರಮಾಣ ಪತ್ರ**

ದಿನಾಂಕ: **11-Aug-2022**

ಸಂಖ್ಯೆ: **24669**

ವಿಷಯ: ಮಕ್ಕಳ ಹಕ್ಕುಗಳ ಶಿಕ್ಷಣ ಕಾಯ್ದೆ-2009 ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ-1983 ಯೊಳಗೆ ರಚಿತವಾಗಿರುವ ನಿಯಮಗಳನ್ವಯ ಶಾಲಾ ಮಾನ್ಯತೆಯನ್ನು ನೀಡುವ ಬಗ್ಗೆ.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ **CMI CHRIST EDUCATIONAL AND CHARITABLE TRUST** ಆಡಳಿತ ಮಂಡಳಿಯು **29270218409** ಡೈಸ್ ಕೋಡ್ ಸಂಖ್ಯೆ **CHRIST CMI PUBLIC SCHOOL GUNDLUPET TOWN-CHAVARA BHAVANA,GUNDLUPETE TOWN** ಶಾಲೆಗೆ [ವಿಳಾಸ], **1 - 8** ತರಗತಿವರೆಗೆ **English** ಮಾಧ್ಯಮ **Renewal Recognition** ಶಾಲಾ [ಪ್ರಥಮ ಮಾನ್ಯತೆ / ಮಾನ್ಯತೆ ನವೀಕರಣ] ಮಾನ್ಯತೆಯನ್ನು ನವೀಕರಿಸಲು ಆನ್‌ಲೈನ್‌ನಲ್ಲಿ ಸಲ್ಲಿಸಿದ್ದ ಅರ್ಜಿಯನ್ನು ಇಲಾಖೆಯ ಅಧಿಕಾರಿಗಳು ದಾಖಲೆಗಳನ್ನು ಪರಿಶೀಲಿಸಿ, ಸ್ಥಳ ಪರಿಶೀಲನೆ ನಡೆಸಿ, **01-Jun-2022** ಸಾಲಿನಿಂದ **31-May-2027** ಸಾಲಿನವರೆಗೆ ಈ ಕೆಳಕಂಡ ಷರತ್ತುಗಳೊಂದಿಗೆ ಮಾನ್ಯತೆಯನ್ನು ನವೀಕರಿಸಿದೆ.

| ಕ್ರ.ಸಂ | ವಿವರ | ಆನ್ಲೈನ್ ಅರ್ಜಿ ಸಂಖ್ಯೆ :- 24669 |
|---|---|---|
| 1 | ಆಡಳಿತ ಮಂಡಳಿಯ ಹೆಸರು ಮತ್ತು ವಿಳಾಸ | **CMI CHRIST EDUCATIONAL AND CHARITABLE TRUST** |
| 2 | ಶಾಲೆಯ ಹೆಸರು ಮತ್ತು ವಿಳಾಸ | **CHRIST CMI PUBLIC SCHOOL GUNDLUPET TOWN-CHAVARA BHAVANA,GUNDLUPETE TOWN** |
| 3 | ಡೈಸ್ ಕೋಡ್ ಸಂಖ್ಯೆ: | **29270218409** |
| 4 | ಪ್ರಥಮ ಮಾನ್ಯತೆ / ಮಾನ್ಯತೆ<br>ನವೀಕರಣ ಮಾಡಿದ ಶೈಕ್ಷಣಿಕ ಸಾಲು (ಅವಧಿ) | **2022-2023 ಸಾಲಿನಿಂದ 2026-2027 ರವರೆಗೆ** |
| 5 | ತರಗತಿ/ ವಿಭಾಗ/ ಮಾಧ್ಯಮ/ 1 ರಿಂದ 5, 1 ರಿಂದ 8, 6 ರಿಂದ 8, (1 ರಿಂದ 10 ಅಥವಾ 9 ಮತ್ತು 10 ತರಗತಿಗಳು) | ತರಗತಿ : **1 to 8**<br>ತಲಾ ವಿಭಾಗಗಳು : **1**<br>ಮಾಧ್ಯಮ : **English** |
| 6 | ಶಾಲೆಯನ್ನು ಅನುದಾನ ಸಹಿತ/ ಅನುದಾನ ರಹಿತ ವಾಗಿ ಪ್ರಥಮ ಮಾನ್ಯತೆ ಮಾನ್ಯತೆ ನವೀಕರಣ ನೀಡಿದೆ | **Pvt. Unaided / Renewal Recognition** |

ಷರತ್ತುಗಳು:

1. ಮಕ್ಕಳ ಹಕ್ಕುಗಳ ಶಿಕ್ಷಣ ಕಾಯ್ದೆ-2009, ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ-1983ರ ಅಡಿಯಲ್ಲಿ ಹಾಗೂ ಅದರ ಅಡಿಯಲ್ಲಿ ರಚಿತವಾದ ನಿಯಮಗಳ ಅನುಸಾರ ಶಾಲೆಯನ್ನು ನೋಂದಾಯಿಸಿದ್ದು, ನೋಂದಾಯಿಸಿದ ಶಾಲೆಯ ತರಗತಿವರೆಗೆ ಮಾನ್ಯತೆಯನ್ನು ನವೀಕರಿಸಲಾಗಿದೆ. [ಪ್ರಾಥಮಿಕ ಶಿಕ್ಷಣ / ಪ್ರೌಢ ಶಿಕ್ಷಣ] **1to 5th** [1 ರಿಂದ 5, 1 ರಿಂದ 8, 6 ರಿಂದ 8, 9 ಮತ್ತು 10 ಹಾಗೂ 1 ರಿಂದ 10] ಈ ಶಾಲೆಗಳ ತರಗತಿಗಳ ಹೊರತಾಗಿ ಹೆಚ್ಚುವರಿ ತರಗತಿಗಳನ್ನು ಮತ್ತು ವಿಭಾಗಗಳನ್ನು ನಡೆಸಲು ಅನುಮತಿ ಇರುವುದಿಲ್ಲ.
2. ಶಾಲೆಯು ಕರ್ನಾಟಕ ಶಿಕ್ಷಣ ಕಾಯ್ದೆ-1983 ಮತ್ತು ಮಕ್ಕಳ ಹಕ್ಕುಗಳ ಶಿಕ್ಷಣ ಕಾಯ್ದೆ-2009 ಅದರಡಿಯಲ್ಲಿ ರಚಿತವಾದ ನಿಯಮಗಳ ಅಡಿಯಲ್ಲಿ ಕಾರ್ಯನಿರ್ವಹಿಸುವುದು.
3. ಮಕ್ಕಳ ಹಕ್ಕುಗಳ ಶಿಕ್ಷಣ ಕಾಯ್ದೆ-2009 ಅದರಡಿಯಲ್ಲಿ ರಚಿತವಾದ ನಿಯಮಗಳ ಅಡಿಯಲ್ಲಿ ಶೇಕಡಾ 25%ರಷ್ಟು ಸೀಟುಗಳನ್ನು ದುರ್ಬಲ ವರ್ಗದ ಮಕ್ಕಳಿಗೆ ಮೀಸಲಿರುವುದು. ಆರ್.ಟಿ.ಇ ವ್ಯಾಪ್ತಿಗೆ ಒಳಪಡುವ ಶಾಲೆಗಳಿಗೆ ಸರ್ಕಾರವು ಮೀಸಲಿಟ್ಟ ಸೀಟುಗಳನ್ನು ಆರ್.ಟಿ.ಇ ಅಡಿಯಲ್ಲಿ ದಾಖಲಿಸಲು ಅಧಿಕಾರ ಹೊಂದಿರುತ್ತದೆ. [ಸರ್ಕಾರವು ಮಕ್ಕಳ ಪೋಷಕರು ವಾಸಿಸುವ ಅಕ್ಕ-ಪಕ್ಕದ ಶಾಲೆಗಳಲ್ಲಿ ದಾಖಲಿಸಲು ಅನುಕೂಲವಾಗುವಂತೆ ನಿಯಮಗಳನ್ನು ರೂಪಿಸಿದ್ದು, ಅದರಂತೆ ಸರ್ಕಾರಿ, ಸರ್ಕಾರದಿಂದ ಅನುದಾನ ಪಡೆದ ಶಿಕ್ಷಣ ಸಂಸ್ಥೆಗಳು ಇದ್ದಲ್ಲಿ ಆ ಶಾಲೆಗೆ ಮಕ್ಕಳನ್ನು ದಾಖಲಿಸಲಾಗುವುದು] ಇಲ್ಲದಿದ್ದ ಪಕ್ಷದಲ್ಲಿ ಖಾಸಗಿ ಶಾಲೆಗಳು ಸರ್ಕಾರದಿಂದ ದಾಖಲಿಸುವ ಮಕ್ಕಳನ್ನು ದಾಖಲಿಸಿಕೊಂಡು ಪ್ರಾಥಮಿಕ ಹಂತದವರೆಗೆ ವಿದ್ಯಾಭ್ಯಾಸ ಮುಂದುವರೆಸಲು ಅವಕಾಶ ನೀಡುವುದು. ಈ ಮಕ್ಕಳನ್ನು ಯಾವುದೇ ತಾರತಮ್ಯವಿಲ್ಲದೆ ವ್ಯಾಸಂಗ ಮುಂದುವರೆಸಲು ಅವಕಾಶ ಕಲ್ಪಿಸುವುದು.
4. ಕಂಡಿಕೆ:3ರಲ್ಲಿ ವಿವರಿಸಿರುವಂತೆ ಆರ್.ಟಿ.ಇ ನಿಯಮದಡಿ ದಾಖಲಾದ ಮಕ್ಕಳ ಶುಲ್ಕಗಳನ್ನು ನಿಯಮಾನುಸಾರ ಸರ್ಕಾರವು ಬಿಡುಗಡೆ ಮಾಡುತ್ತದೆ. ಆದ್ದರಿಂದ ಈ ಮಕ್ಕಳಿಂದ ಯಾವುದೇ ಶುಲ್ಕವನ್ನು ವಸೂಲು ಮಾಡುವುದನ್ನು ನಿರ್ಬಂಧಿಸಿದೆ.
5. ಶಾಲೆ ಮತ್ತು ಶಾಲೆಯ ಆಡಳಿತ ಮಂಡಳಿಯು ಯಾವುದೇ ತರಹದ ಕ್ಯಾಪಿಟೇಷನ್ ಶುಲ್ಕವನ್ನು ಮತ್ತು ಸ್ವಇಚ್ಛೆಯಿಂದ ನೀಡುವ ಡೊನೇಷನ್‌ಗಳನ್ನು ಪೋಷಕರಿಂದ ದಾಖಲಾತಿ ಸಮಯದಲ್ಲಾಗಲೀ ಅಥವಾ ನಂತರದಲ್ಲಾಗಲೀ ಯಾವುದೇ ರೀತಿಯಾಗಿ ವಸೂಲು ಮಾಡುವುದನ್ನು ನಿರ್ಬಂಧಿಸಿದೆ.
6. ಶಾಲೆಯು / ಆಡಳಿತ ಮಂಡಳಿಯು ತಮ್ಮ ಶಾಲೆಯಲ್ಲಿ ಮಕ್ಕಳ ಪೋಷಕರಿಂದ ವ್ಯಾಸಂಗ ಶುಲ್ಕವಾಗಿ ವಸೂಲು ಮಾಡುವ ಶುಲ್ಕದ ಮಾಹಿತಿಯನ್ನು ರಾಜ್ಯ ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ:31:ಪಿಜಿಸಿ:2019, ದಿನಾಂಕ:27.07.2019ರನ್ವಯ ಮಾಹಿತಿಗಳನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಹಾಗೂ ಶಾಲಾ ಸೂಚನಾ ಫಲಕದಲ್ಲಿ ಪ್ರಕಟಿಸುವುದು. ನಿಗದಿತ ಶುಲ್ಕಕ್ಕಿಂತ ಹೆಚ್ಚುವರಿ ಶುಲ್ಕವನ್ನು ವಸೂಲು ಮಾಡತಕ್ಕದ್ದಲ್ಲ.
7. ಶಾಲೆಯು / ಆಡಳಿತ ಮಂಡಳಿಯು ವಿದ್ಯಾರ್ಥಿಗಳನ್ನು ಸರ್ಕಾರವು ನಿಗದಿಪಡಿಸಿದ ಅವಧಿಯಲ್ಲಿಯೇ ದಾಖಲಾತಿ ಮಾಡಿಕೊಳ್ಳುವುದು.
8. ಶಾಲೆಯು / ಆಡಳಿತ ಮಂಡಳಿಯು ಈ ಕೆಳಕಂಡ ಅಂಶಗಳ ವಿರುದ್ಧ ದಾಖಲಾತಿಯನ್ನು ನಿರಾಕರಿಸುವಂತಿಲ್ಲ.

(i) ವಯಸ್ಸಿನ ಪುರಾವೆ ಕೊರತೆಯಿಂದಾಗಿ.